**ಕರ್ನಾಟಕ ಸರ್ಕಾರ**

ಸಂ:ಗ್ರಾಅಪ/04/ಗ್ರಾನೀಸ(5)2014

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ:28.01.2014

**ಅಧಿಸೂಚನೆ**

**ವಿಷಯ:** ಕುಡಿಯುವ ನೀರು ಸರಬರಾಜು ಯೋಜನೆ ಕಾಮಗಾರಿಗಳಿಗೆ ಅಲ್ಪಾವಧಿ ಟೆಂಡರ್ ಕರೆಯಲು ಅನುಮತಿ ನೀಡುವ ಕುರಿತು.

**ಉಲ್ಲೇಖ:**
1. ಮುಖ್ಯ ಇಂಜಿನಿಯರ್, PREDರವರ ಪತ್ರ ಸಂಖ್ಯೆ: ಮುಇಂ/ಪಂರಾಇಂಇ/ತ್ವಗ್ರಾನೀಸ-1/ತಾಂಸ-1/ಸಇಂ-5/2013-14, ದಿನಾಂಕ:23.12.2013.
2. ಆರ್ಥಿಕ ಇಲಾಖೆ ಸಹಮತಿ ಸಂಖ್ಯೆ: ಆಇ/14/ವೆಚ್ಚ-6/2014, ದಿನಾಂಕ:27.01.2014

---

ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಅನುಮೋದನೆಯಾದ ಕುಡಿಯುವ ನೀರು ಪೂರೈಕೆ ಯೋಜನೆಗಳ ಕಾಮಗಾರಿಗಳನ್ನು **KTPP** ನಿಯಮಗಳನ್ವಯ ಟೆಂಡರ್ ಮೂಲಕವೇ ನಿರ್ವಹಿಸಬೇಕಾಗಿದ್ದು, ಈಗಿರುವ ಟೆಂಡರ್ ಅವಧಿ ಪ್ರಕ್ರಿಯೆಯಿಂದಾಗಿ ಕಾಮಗಾರಿಗಳನ್ನು ತುರ್ತಾಗಿ ಕೈಗೆತ್ತಿಕೊಂಡು ಪೂರ್ಣಗೊಳಿಸುವಲ್ಲಿ ವಿಳಂಬವಾಗುತ್ತಿದೆ. ಆದ್ದರಿಂದ, ಕುಡಿಯುವ ನೀರು ಸರಬರಾಜು ಯೋಜನೆಗಳ ಕಾಮಗಾರಿಗಳನ್ನು ತುರ್ತಾಗಿ ಕೈಗೆತ್ತಿಕೊಳ್ಳಬೇಕಾಗಿರುವುದರಿಂದ, ಕರ್ನಾಟಕ ಸಾರ್ವಜನಿಕ ಪಾರದರ್ಶಕತೆ ಅಧಿನಿಯಮಗಳಿಗೆ ಮಾರ್ಪಾಡು ತರಬೇಕಾಗಿದೆ. ಆದುದರಿಂದ, ಕುಡಿಯುವ ನೀರು ಸರಬರಾಜು ಯೋಜನೆ ಕಾಮಗಾರಿಗಳಿಗೆ ಅಲ್ಪಾವಧಿ ಟೆಂಡರ್ ಕರೆಯುವುದಕ್ಕೆ **KTPP ಅಧಿನಿಯಮ 2000ರ ಕಲಂ 17 (2)**ರನ್ವಯ ಟೆಂಡರ್‌ಗಳನ್ನು ಸಲ್ಲಿಸಲು ಕನಿಷ್ಠ ಸಮಯವನ್ನು ಈ ಕೆಳಗಿನಂತೆ ನಿಗದಿಪಡಿಸಿದೆ.

1. ಎರಡು ಕೋಟಿ ರೂ.ಗಳವರೆಗಿನ ಮೌಲ್ಯದ ಟೆಂಡರ್‌ಗಳಿಗೆ ಹದಿನೈದು (15) ದಿನಗಳು.
2. ಎರಡು ಕೋಟಿ ರೂ.ನಿಂದ ನೂರು ಕೋಟಿ ರೂ.ಗಳವರೆಗಿನ ಮೌಲ್ಯದ ಟೆಂಡರ್‌ಗಳಿಗೆ ಮೂವತ್ತು (30) ದಿನಗಳು.
3. ನೂರು ಕೋಟಿ ರೂ.ಗಳಿಗೆ ಮಿಗಿಲಾದ ಮೌಲ್ಯದ ಟೆಂಡರ್‌ಗಳಿಗೆ ಅರವತ್ತು (60) ದಿನಗಳು.

29/1/14

(ರಾಮಕೃಷ್ಣ)
ಸರ್ಕಾರದ ಉಪ ಕಾರ್ಯದರ್ಶಿ(ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
ಇಮೇಲ್:rk3452000@yahoo.co.in
ಫೋನ್:22032806, ಫ್ಯಾಕ್ಸ್:22203175

ಇವರಿಗೆ:
1. ರಾಜ್ಯದ ಎಲ್ಲಾ (30) ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ರಾಜ್ಯದ ಎಲ್ಲಾ (30) ಜಿಲ್ಲಾ ಪಂಚಾಯಿತಿಗಳ ಮುಖ್ಯ ಲೆಕ್ಕಾಧಿಕಾರಿಗಳು.
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, 2ನೇ ಮಹಡಿ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ವೃತ್ತ, ಬೆಂಗಳೂರು-09.
4. ರಾಜ್ಯದ ಎಲ್ಲಾ (8) ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತಗಳ ಅಧೀಕ್ಷಕ ಅಭಿಯಂತರರು.
5. ರಾಜ್ಯದ ಎಲ್ಲಾ (38) ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳ ಕಾರ್ಯಪಾಲಕ ಅಭಿಯಂತರರು.

ಪ್ರತಿ:
1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆರವರ ಆಪ್ತ ಕಾರ್ಯದರ್ಶಿ.
2. ನಿರ್ದೇಶಕರು, KRWSSA ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, RDPR ಇಲಾಖೆ ಇವರ ಆಪ್ತ ಕಾರ್ಯದರ್ಶಿ.